## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 76 |
| ಸದಸ್ಯರ ಹೆಸರು | ಶ್ರೀಮತಿ ಎಸ್. ವೀಣಾ ಅಚ್ಚಯ್ಯ |
| ಉತ್ತರಿಸಬೇಕಾದ ದಿನಾಂಕ | 09-07-2018 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಡಯಾಲಿಸಿಸ್ ಕೇಂದ್ರಗಳ ಸ್ಥಾಪನೆಗೆ ಸರ್ಕಾರ ನಿಗದಿಪಡಿಸಿರುವ ಮಾನದಂಡ ಹಾಗೂ ನಿಯಮಗಳೇನು; (ಪೂರ್ಣ ವಿವರ ನೀಡುವುದು) | ರಾಷ್ಟ್ರೀಯ ಪ್ರಧಾನ ಮಂತ್ರಿ ಡಯಾಲಿಸಿಸ್ ನಿಯಂತ್ರಣಾ ಕಾರ್ಯಕ್ರಮದಡಿಯಲ್ಲಿ ಪ್ರತಿ ಜಿಲ್ಲಾ ಆಸ್ಪತ್ರೆಯಲ್ಲಿ 10 ಡಯಾಲಿಸಿಸ್ ಯಂತ್ರಗಳನ್ನು ಹಾಗೂ ಪ್ರತಿ ತಾಲ್ಲೂಕು ಆಸ್ಪತ್ರೆಯಲ್ಲಿ 2 ಡಯಾಲಿಸಿಸ್ ಯಂತ್ರಗಳನ್ನು ಅಳವಡಿಸುವ ನಿರ್ದೇಶನವಿರುತ್ತದೆ ಹಾಗೂ ಇದೇ ಮಾನದಂಡವಾಗಿರುತ್ತದೆ.<br>ಒಟ್ಟು 3 ಪ್ರಧಾನ ಆಸ್ಪತ್ರೆಗಳು, 20 ಜಿಲ್ಲಾ ಆಸ್ಪತ್ರೆಗಳು ಹಾಗೂ 148 ತಾಲ್ಲೂಕು ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಸೌಲಭ್ಯವನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಒದಗಿಸಲು ಕ್ರಮವಹಿಸಲಾಗಿದೆ.<br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಡಯಾಲಿಸಿಸ್ ಕೇಂದ್ರಗಳಲ್ಲಿ ಎಲ್ಲಾ ವರ್ಗದವರಿಗೆ ಉಚಿತವಾಗಿ ಡಯಾಲಿಸಿಸ್ ಸೌಲಭ್ಯವನ್ನು ಒದಗಿಸಲಾಗುತ್ತಿದೆ.<br>ಇಲಾಖಾ ವತಿಯಿಂದ ಡಯಾಲಿಸಿಸ್ ಕೇಂದ್ರ ಸ್ಥಾಪನೆಗೆ ಸ್ಥಳಾವಕಾಶ, ನೀರು ಮತ್ತು ವಿದ್ಯುತ್ ಸೌಲಭ್ಯವನ್ನು ಒದಗಿಸಬೇಕಾಗಿರುತ್ತದೆ.<br>ಡಯಾಲಿಸಿಸ್ ಸೇವೆಯನ್ನು ಒದಗಿಸಲು ಗುರುತಿಸಲಾದ ಸೇವಾದಾರರು ಮಾನವಸಂಪನ್ಮೂಲ, ಡಯಾಲಿಸಿಸ್ ಯಂತ್ರಗಳು, ಆರ್.ಓ ಪ್ಲಾಂಟ್ ಹಾಗೂ ಡಯಾಲಿಸಿಸ್ ಪರಿಕರಗಳನ್ನು ಒದಗಿಸಬೇಕಾಗಿರುತ್ತದೆ. |
| ಆ | ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಡಯಾಲಿಸಿಸ್ ಕೇಂದ್ರಗಳ ಸಂಖ್ಯೆ ಎಷ್ಟು; ಹಾಗೂ ಯಾವುವು; ಈ ಕೇಂದ್ರಗಳಿಗೆ ನಿಯೋಜಿಸಿರುವ ಸಿಬ್ಬಂದಿಗಳೆಷ್ಟು; | ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಡಯಾಲಿಸಿಸ್ ಕೇಂದ್ರಗಳು -3.<br>ಜಿಲ್ಲಾ ಆಸ್ಪತ್ರೆ ಕೊಡಗು, ತಾಲ್ಲೂಕು ಆಸ್ಪತ್ರೆ ಸೋಮವಾರಪೇಟೆ, ತಾಲ್ಲೂಕು ಆಸ್ಪತ್ರೆ ವಿರಾಜಪೇಟೆ.<br>ಸದರಿ ಕೇಂದ್ರಗಳಿಗೆ ಇಲಾಖಾ ವತಿಯಿಂದ ಸಿಬ್ಬಂದಿಗಳನ್ನು ನಿಯೋಜಿಸಿರುವುದಿಲ್ಲ. ಸಾರ್ವಜನಿಕ - ಖಾಸಗಿ ಸಹಭಾಗಿತ್ವದಲ್ಲಿ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. |
| ಇ | ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳ ಪ್ರಕಾರ ಜನಸಂಖ್ಯೆಗೆ ಅನುಗುಣವಾಗಿ ಕೊಡಗು ಜಿಲ್ಲೆಯಲ್ಲಿ ಡಯಾಲಿಸಿಸ್ ಕೇಂದ್ರಗಳು ಸ್ಥಾಪನೆಯಾಗಿವೆಯೇ; ಹಾಗೂ ಅವು ಕಾರ್ಯನಿರ್ವಹಿಸುತ್ತಿವೆಯೇ; | ಹೌದು |
| ಈ | ಕೊಡಗು ಜಿಲ್ಲೆಯಲ್ಲಿ ಜನಸಂಖ್ಯೆಗನುಗುಣವಾಗಿ ಸದರಿ ಕೇಂದ್ರಗಳ ಸ್ಥಾಪನೆಯಾಗದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸ್ಥಾಪಿಸಲಾಗುವುದು; | ಉದ್ಭವಿಸುವುದಿಲ್ಲ |

ಕಡತ ಸಂಖ್ಯೆ: ಆಕುಕ 32 ಎಸ್‌ಟಿಕ್ಯೂ 2018

(ಶಿವಾನಂದ ಎಸ್. ಪಾಟೀಲ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು